# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನ ಆಯವ್ಯಯ ಕಂಡಿಕೆ-399ರನ್ವಯ ಎರಡು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆಗೆ ಚಾಲನೆ ನೀಡುವ ಬಗ್ಗೆ.

ಓದಲಾಗಿದೆ: 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-399

***

ಪ್ರಸ್ತಾವನೆ:

ಮೇಲೆ ಓದಲಾದ 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-399ರಲ್ಲಿ "ಸಾರ್ವಜನಿಕ ಉದ್ದಿಮೆಗಳಲ್ಲಿ ಖಾಸಗಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಿ, ಲಾಭದಾಯಕತೆ ಮತ್ತು ಕಾರ್ಯದಕ್ಷತೆ ಹೆಚ್ಚಿಸಲು, ಆಯ್ದ ಎರಡು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು,"ಎಂದು ಘೋಷಿಸಲಾಗಿರುತ್ತದೆ.

ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆ (Disinvestment Process) ಕುರಿತಂತೆ ಚಾಲನೆ ನೀಡಲು ಹಾಗೂ ಈ ಸಂಬಂಧ ಸರ್ಕಾರಿ ಸ್ವಾಮ್ಯದ 02 ಉದ್ದಿಮೆಗಳನ್ನು ಷೇರು ಮಾರುಕಟ್ಟೆಯ ಲಿಸ್ಟೆಡ್ ಕಂಪನಿಗಳ ಪಟ್ಟಿಗೆ ಸೇರ್ಪಡೆಗೊಳಿಸುವ ಕುರಿತಂತೆ Transaction Advisor ಆಗಿ ನೇಮಕವಾಗಿರುವ M/s. Darashaw Co. Pvt. Ltd., ಸಂಸ್ಥೆಯು ಸಾರ್ವಜನಿಕ ಉದ್ದಿಮೆಗಳ ಇಲಾಖೆಯಡಿಯ 60 ಉದ್ಯಮಗಳ ಅಧ್ಯಯನ ನಡೆಸಿ, ಸರ್ಕಾರವು ನೀಡಿರುವ ಮಾನದಂಡಗಳನ್ನು ಅನುಸರಿಸಿ, ಮೊದಲ ಹಂತದಲ್ಲಿ 15 ಉದ್ದಿಮೆಗಳನ್ನು ಆಯ್ಕೆ ಮಾಡಿದೆ. ಸದರಿ ಸಂಸ್ಥೆಯು ಮೊದಲ ಹಂತದಲ್ಲಿ ಆಯ್ಕೆಯಾದ 15 ಉದ್ಯಮಗಳನ್ನು ಮತ್ತಷ್ಟು ವಿಶ್ಲೇಶಣಾತ್ಮಕವಾಗಿ ಅಧ್ಯಯನ ನಡೆಸಿ 05 ಸಾರ್ವಜನಿಕ ಉದ್ದಿಮೆಗಳನ್ನು ಅಂತಿಮಗೊಳಿಸಿ ವರದಿ ನೀಡಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಹಾಗೂ ಪ್ರಸ್ತಾವಿತ ಯೋಜನೆ ಕುರಿತಂತೆ ಸಾರ್ವಜನಿಕ ಉದ್ದಿಮೆಗಳ ಇಲಾಖೆಯು ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಗಳೊಂದಿಗೆ ಸಮಾಲೋಚಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಾಉಇ 07 ಎಂಎಸ್ಐ 2022,**

**ಬೆಂಗಳೂರು, ದಿನಾಂಕ:13-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-399ರಲ್ಲಿ, ಸಾರ್ವಜನಿಕ ಉದ್ದಿಮೆಗಳಲ್ಲಿ ಖಾಸಗಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಿ,

ಲಾಭದಾಯಕತೆ ಮತ್ತು ಕಾರ್ಯದಕ್ಷತೆ ಹೆಚ್ಚಿಸಲು, ಆಯ್ದ ಎರಡು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು" ಎಂಬ ಘೋಷಣೆಗೆ ಸಂಬಂಧಿಸಿದಂತೆ, ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆ ಬಗ್ಗೆ Transaction Advisor ಆಗಿ ನೇಮಕವಾಗಿರುವ M/s. Darashaw Co. Pvt. Ltd., ಸಂಸ್ಥೆಯಿಂದ ಸರ್ಕಾರದಲ್ಲಿ ಸ್ವೀಕೃತವಾಗಿರುವ ವರದಿಯನ್ವಯ, ಎರಡು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ಬಂಡವಾಳ ಹಿಂತೆಗೆಯುವಿಕೆ ಪ್ರಕ್ರಿಯೆಗೆ ಚಾಲನೆ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಪ್ರಸ್ತಾವನೆಯ ಬಂಡವಾಳ ಹಿಂತಗೆತಕ್ಕೆ ತಗಲುವ ವೆಚ್ಚವನ್ನು ಸಂಬಂಧಿಸಿದ ಸಾರ್ವಜನಿಕ ಉದ್ದಿಮೆಗಳೇ ಭರಿಸತಕ್ಕದ್ದು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 137 ವೆಚ್ಚ-1/2022, ದಿನಾಂಕ:12.04.2022 ಹಾಗೂ ಯೋಜನಾ ಇಲಾಖೆಯ ಹಿಂಬರಹ ಸಂಖ್ಯೆ: ಪಿಡಿಎಸ್-ಪಿಎಫ್‌ಒ/27/ 2022, ದಿನಾಂಕ:04.04.2022ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

Mallikarjuna N.J. 13/04/22

(ಮಲ್ಲಿಕಾರ್ಜುನ ಎನ್.ಜೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಾರ್ವಜನಿಕ ಉದ್ದಿಮೆಗಳ ಇಲಾಖೆ (ತಾಂತ್ರಿಕ)

ಇವರಿಗೆ:

1) ಪ್ರಧಾನ ಮಹಾಲೇಖಪಾಲರು(ಎ&ಇ), ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಸಾರ್ವಜನಿಕ ಉದ್ದಿಮೆಗಳ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
6) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರ್ವಜನಿಕ ಉದ್ದಿಮೆಗಳ ಇಲಾಖೆ
7) ಶಾಖಾ ರಕ್ಷಾ ಕಡತ/ಕಚೇರಿ ಪ್ರತಿ/ಹೆಚ್ಚುವರಿ ಪ್ರತಿ.